**ಕರ್ನಾಟಕ ವಿಧಾನ ಪರಿಷತ್ತು**

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಶಾಂತರಾಮ ಬುಡ್ನ ಸಿದ್ದಿ ರವರು ನಿಯಮ 72ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.**

**ವಿಷಯ:-**

ಉತ್ತರ ಕನ್ನಡ ಜಿಲ್ಲೆಯ ಭಟ್ಕಳ ತಾಲ್ಲೂಕಿನಲ್ಲಿ ವಾಸಿಸುವ "ಗೊಂಡ" ಸಮುದಾಯದವರಿಗೆ ಪರಿಶಿಷ್ಟ ಪಂಗಡದ ಜಾತಿ ಪ್ರಮಾಣ ಪತ್ರ ಕೊಡದೆ ಇರುವುದರಿಂದ ಆಗುತ್ತಿರುವ ಸಮಸ್ಯೆಯ ಬಗ್ಗೆ.

**ಉತ್ತರ:-**

ರಾಜ್ಯದಲ್ಲಿ ಪರಿಶಿಷ್ಟ ಪಂಗಡದ ಪಟ್ಟಿಯಲ್ಲಿ ಒಟ್ಟು 50 ಜಾತಿಗಳು ಇರುತ್ತವೆ. ಅದರಲ್ಲಿ ಗೊಂಡ, ರಾಜಗೊಂಡ, ನಾಯಕ್ ಪೊಡ್ ನಮೂದಾಗಿರುತ್ತದೆ. ಜಾತಿ ಪ್ರಮಾಣ ಪತ್ರಗಳನ್ನು ನೀಡುವ ಸಕ್ಷಮ ಪ್ರಾಧಿಕಾರ ಕಂದಾಯ ಇಲಾಖೆಯ ತಹಸಿಲ್ದಾರರವರಾಗಿರುತ್ತಾರೆ. ಸಮಾಜ ಕಲ್ಯಾಣ ಇಲಾಖೆಯು ಹೊರಡಿಸಿರುವ ಸುತ್ತೋಲೆಗಳನ್ವಯ ಜಾತಿ ಪ್ರಮಾಣ ಪತ್ರ ನೀಡಲು ಅನುಸರಿಸಬೇಕಾದ ಕ್ರಮಗಳನ್ನು ಪರಿಶೀಲಿಸಿಕೊಂಡು ನಿಯಮಾನುಸಾರ ಅರ್ಹರಿಗೆ ಜಾತಿ ಪ್ರಮಾಣ ಪತ್ರವನ್ನು ನಿಗಧಿತ ಅವಧಿಯೊಳಗೆ ನೀಡುವಂತೆ ಸಕ್ಷಮ ಪ್ರಾಧಿಕಾರಗಳಿಗೆ ಸೂಚಿಸಲಾಗಿರುತ್ತದೆ. ಇದರನ್ವಯ ಉತ್ತರ ಕನ್ನಡ ಜಿಲ್ಲೆಯ ಭಟ್ಕಳ ತಾಲ್ಲೂಕಿನಲ್ಲಿ ವಾಸವಿರುವ ಗೊಂಡ ಸಮುದಾಯದವರಿಗೂ ಸಹ ನಿಯಮಾನುಸಾರ ಹಾಗೂ ಕಾನೂನಿನನ್ವಯ ಜಾತಿ ಪ್ರಮಾಣ ಪತ್ರಗಳನ್ನು ನೀಡುವ ಬಗ್ಗೆ ಸಕ್ಷಮ ಪ್ರಾಧಿಕಾರಗಳು ಕ್ರಮವಹಿಸುತ್ತಿವೆ.

(Competant)

**ಸಕಇ 119 ಎಸ್‌ಎಡಿ 2022.**

**(ಬಿ. ಶ್ರೀರಾಮುಲು)**
ಸಾರಿಗೆ ಹಾಗೂ ಪರಿಶಿಷ್ಟ ಪಂಗಡಗಳ
ಕಲ್ಯಾಣ ಇಲಾಖಾ ಸಚಿವರು